**ಪ್ರಧಾನಿಯಿಂದ ರಷ್ಯಾ ಒಕ್ಕೂಟದ ಅಧ್ಯಕ್ಷರ ಭೇಟಿ (ಸೆಪ್ಟೆಂಬರ್ 01, 2025)**

ಸೆಪ್ಟೆಂಬರ್ 01, 2025

ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ರಷ್ಯಾ ಒಕ್ಕೂಟದ ಅಧ್ಯಕ್ಷ ಗೌರವಾನ್ವಿತ ಶ್ರೀ ವ್ಲಾಡಿಮಿರ್ ಪುಟಿನ್ ಅವರನ್ನು ಇಂದು ಭೇಟಿಯಾದರು.

2. ನಾಯಕರು ಆರ್ಥಿಕ, ಹಣಕಾಸು ಮತ್ತು ಇಂಧನ ವಲಯಗಳನ್ನು ಒಳಗೊಂಡಂತೆ ದ್ವಿಪಕ್ಷೀಯ ಸಹಕಾರದ ಬಗ್ಗೆ ಚರ್ಚಿಸಿದರು ಮತ್ತು ಈ ಕ್ಷೇತ್ರಗಳಲ್ಲಿನ ದ್ವಿಪಕ್ಷೀಯ ಸಂಬಂಧಗಳ ನಿರಂತರ ಬೆಳವಣಿಗೆಯ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು.

3. ಉಕ್ರೇನ್‌ಗೆ ಸಂಬಂಧಿಸಿದ ಇತ್ತೀಚಿನ ಬೆಳವಣಿಗೆಗಳನ್ನು ಒಳಗೊಂಡಂತೆ ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳ ಬಗ್ಗೆ ಉಭಯ ನಾಯಕರು ಚರ್ಚಿಸಿದರು. ಉಕ್ರೇನ್‌ನಲ್ಲಿನ ಸಂಘರ್ಷವನ್ನು ಪರಿಹರಿಸಲು ಕೈಗೊಂಡ ಇತ್ತೀಚಿನ ಉಪಕ್ರಮಗಳಿಗೆ ಪ್ರಧಾನಮಂತ್ರಿ ತಮ್ಮ ಬೆಂಬಲವನ್ನು ಪುನರುಚ್ಚರಿಸಿದರು ಮತ್ತು ಸಂಘರ್ಷವನ್ನು ತ್ವರಿತವಾಗಿ ನಿಲ್ಲಿಸುವ ಮತ್ತು ದೃಢವಾದ ಶಾಂತಿ ಇತ್ಯರ್ಥವನ್ನು ಕಂಡುಕೊಳ್ಳುವ ಅಗತ್ಯವನ್ನು ಒತ್ತಿ ಹೇಳಿದರು.

4. ಉಭಯ ನಾಯಕರು ಎರಡೂ ದೇಶಗಳ ನಡುವೆ ಇರುವ ವಿಶೇಷ ಮತ್ತು ಆತ್ಮೀಯ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ತಮ್ಮ ಬೆಂಬಲವನ್ನು ಪುನರುಚ್ಚರಿಸಿದರು. ಈ ವರ್ಷದ ಕೊನೆಯಲ್ಲಿ ಭಾರತದಲ್ಲಿ ನಡೆಯಲಿರುವ 23 ನೇ ವಾರ್ಷಿಕ ಶೃಂಗಸಭೆಗಾಗಿ ಅವರನ್ನು ಬರ ಮಾಡಿಕೊಳ್ಳಲು ಎದುರು ನೋಡುತ್ತಿರುವುದಾಗಿ ಪ್ರಧಾನಮಂತ್ರಿ ಅವರು ಅಧ್ಯಕ್ಷ ಪುಟಿನ್‌ಗೆ ತಿಳಿಸಿದರು.

ಟಿಯಾಂಜಿನ್

ಸೆಪ್ಟೆಂಬರ್ 01, 2025